# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1442 |
| ಸದಸ್ಯರ ಹೆಸರು | : | ಶ್ರೀ ಟಿ.ಎನ್.ಜವರಾಯಿಗೌಡ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.03.2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಪೀಣ್ಯ ಕೈಗಾರಿಕಾ ಪ್ರದೇಶ 8ನೇ ಮೈಲಿ ಮತ್ತು ಮಾಗಡಿ ಮುಖ್ಯ ರಸ್ತೆ ಸಂಪರ್ಕಿಸುವ ಕರಿಹೊಬನಹಳ್ಳಿ ಇಂದಿರಾನಗರ ಗ್ರಾಮದ ಗಣೇಶ ದೇವಸ್ಥಾನದ ಬಳಿ ಪ್ರತಿ ದಿನವೂ ಬೆಳಿಗ್ಗೆ ಮತ್ತು ಸಂಜೆಯ ಸಮಯದಲ್ಲಿ ವಿಪರೀತ ಟ್ರಾಫಿಕ್ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ.<br><br>ಪೀಣ್ಯ ಕೈಗಾರಿಕಾ ಪ್ರದೇಶದ 8ನೇ ಮೈಲಿ ಮತ್ತು ಮಾಗಡಿ ಮುಖ್ಯ ರಸ್ತೆ ಸಂಪರ್ಕಿಸುವ ಕರಿಹೋಬನಹಳ್ಳಿ ಇಂದಿರಾ ನಗರ ಗ್ರಾಮದ ಗಣೇಶ ದೇವಸ್ಥಾನದ ಬಳಿಯ ರಸ್ತೆ ಕಿರಿದಾಗಿದ್ದು, ಬಿ.ಎಂ.ಟಿ.ಸಿ ವಾಹನಗಳು ಮತ್ತು ಗೂಡ್ಸ್ ವಾಹನಗಳ ಸಂಚಾರ ಅಧಿಕವಾಗಿರುವುದರಿಂದ ಬೆಳಿಗ್ಗೆ ಮತ್ತು ಸಂಜೆ ಪೀಕ್ ಹವರ್ ಸಮಯದಲ್ಲಿ ವಾಹನ ಸಂಚಾರ ದಟ್ಟಣೆವುಂಟಾಗುತ್ತಿರುತ್ತದೆ.<br><br>ಈ ಸಂದರ್ಭದಲ್ಲಿ ಕೋಬ್ರಾ ಸಿಬ್ಬಂದಿಯನ್ನು ನೇಮಕ ಮಾಡಿ, ಸಂಚಾರ ನಿರ್ವಹಣೆ ಮಾಡಲಾಗುತ್ತಿರುತ್ತದೆ. |
| ಆ) | ಬಂದಿದ್ದಲ್ಲಿ, ಇದುವರೆವಿಗೂ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;(ವಿವರ ನೀಡುವುದು) | |
| ಇ) | ಸದರಿ ಜಂಕ್ಷನ್‌ನಲ್ಲಿ ಬೆಳಿಗ್ಗೆ ಶಾಲೆಗೆ ಹೋಗುವ ವಿದ್ಯಾರ್ಥಿಗಳು, ಕೆಲಸಗಳಿಗೆ ಹೋಗುವ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದ್ದು, ಈ ಜಂಕ್ಷನ್‌ಗೆ ಹೊಂದಿಕೊಂಡಂತೆ 3–4 ಶೈಕ್ಷಣಿಕ ಸಂಸ್ಥೆಗಳಿದ್ದು, ಅಲ್ಲಿನ ವಿದ್ಯಾರ್ಥಿಗಳಿಗೆ ರಸ್ತೆ ದಾಟಲು ಸಹ ಆಗದೆ ಸಾವಿರಾರು ಗೂಡ್ಸ್ ವಾಹನಗಳು, ಖಾಸಗಿ ವಾಹನಗಳು ಬಿ.ಎಂ.ಟಿ.ಸಿ ಬಸ್‌ಗಳು ಸಂಚರಿಸುತ್ತಿದ್ದು, ಟ್ರಾಫಿಕ್ ಸಿಗ್ನಲ್ ದೀಪಗಳನ್ನು ಹಾಕಲು ಸರ್ಕಾರ ಕ್ರಮವಹಿಸುವುದೇ ? (ಮಾಹಿತಿ ನೀಡುವುದು); | ಕರಿಹೋಬನಹಳ್ಳಿ ಇಂದಿರಾನಗರ ಗ್ರಾಮದ ಗಣೇಶ ದೇವಸ್ಥಾನದ ಬಳಿ ರಸ್ತೆ ಕಿರಿದಾಗಿರುವುದರಿಂದ ಟ್ರಾಫಿಕ್ ಸಿಗ್ನಲ್ ದೀಪಗಳನ್ನು ಅಳವಡಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ, ಸಂಚಾರ ದಟ್ಟಣೆಯ ಸಂದರ್ಭದಲ್ಲಿ ಕೋಬ್ರಾ ಸಿಬ್ಬಂದಿಯನ್ನು ನೇಮಕ ಮಾಡಿ, ಸಂಚಾರ ನಿರ್ವಹಣೆ ಮಾಡಲಾಗುತ್ತಿರುತ್ತದೆ. |

ಹೆಚ್‌ಡಿ 135 ಎಸ್‌ಎಸ್‌ಟಿ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು